ಅ) ಸರ್ಕಾರದ ದಿನಾಂಕ 13-09-2002ರ ಆದೇಶದಲ್ಲಿ ನೂಲು ಬಿಚ್ಚಾಣಿಕೆಗೆ ವಹಿವಾಟಾಗುವ ಪ್ರತಿ ಕೆಜಿ ಗೂಡಿಗೆ ದಿನಾಂಕ 16-09-2002 ರಿಂದ 15-12-2002 ವರೆಗಿನ 3 ತಿಂಗಳ ಅವಧಿಗೆ ಪ್ರೋತ್ಸಾಹಧನ ಪಾವತಿಸಲು ಆದೇಶಿಸಿದ್ದು. ಈವರೆವಿಗೆ ರೂ. 546.61 ಲಕ್ಷಗಳನ್ನು ಮಾರುಕಟ್ಟೆಗಳಿಗೆ ಬಿಡುಗಡೆ ಮಾಡಲಾಗಿದ್ದು ಇದರಲ್ಲಿ ರೂ. 449.19 ಲಕ್ಷ ಪಾವತಿಸಿದ್ದು ರೂ. 97.42 ಲಕ್ಷಗಳನ್ನು ರೈತರು ಪಡೆಯಬೇಕಾಗಿದೆ. ರೈತರು ಗೂಡು ಮಾರಾಟಕ್ಕೆ ತಂದಾಗ ಅಥವಾ ಅವರ ಅನುಕೂಲಕ್ಕೆ ತಕ್ಕಂತೆ ಪ್ರೋತ್ಸಾಹಧನವನ್ನು ಪಡೆಯಬಹುದು.

ಇ) ರೇಷ್ಮೆ ಗೂಡಿನ ಮಾರುಕಟ್ಟೆಗಳಲ್ಲಿ ಬಹಿರಂಗ ಹರಾಜಿನಲ್ಲಿ ದರ ನಿಗದಿಯಾಗುತ್ತದೆ. ಚೈನಾ ದೇಶದಿಂದ ಹೆಚ್ಚಿನ ಪ್ರಮಾಣದಲ್ಲಿ ರೇಷ್ಮೆಯು ಆಮದು ಆಗುತ್ತಿರುವ ಕಾರಣ ರೇಷ್ಮೆ ಗೂಡಿನ ಬೆಲೆಗಳಲ್ಲಿ ಇಳಿಕೆಯಾಗುತ್ತಿದ್ದು ಕೇಂದ್ರ ಸರ್ಕಾರದ ವಾಣಿಜ್ಯ ಮಂತ್ರಾಲಯದ ನಿಗದಿತ ಪ್ರಾಧಿಕಾರಕ್ಕೆ ಇಲಾಖೆ ಮತ್ತು ಕೇಂದ್ರ ರೇಷ್ಮೆ ಮಂಡಳಿಯು ಸಲ್ಲಿಸಿದ್ದ ಮನವಿ ಪುರಸ್ಕೃತವಾಗಿ ಕನಿಷ್ಟ 33.19 ಅಮೇರಿಕನ್ ಡಾಲರ್‌ಗಳ ದರದಲ್ಲಿ ಚೈನಾ ದೇಶವು ರೇಷ್ಮೆ ಸರಬರಾಜು ಮಾಡಬಹುದೆಂಬ ಆದೇಶ ಹೊರಡಿಸಲಾಗಿದೆ. ಇದರಿಂದ ರೇಷ್ಮೆ ಗೂಡಿನ ಧಾರಣೆಯಲ್ಲಿ ಸ್ವಲ್ಪ ಮಟ್ಟಿನ ಏರಿಕೆ ಕಂಡುಬಂದು ರೈತರಿಗೆ ಆಶಾಭಾವನೆ ಮೂಡಿದೆ.

ಈ) ಕೇಂದ್ರ ಸರ್ಕಾರಕ್ಕೆ ಈಗಾಗಲೇ ಮನವಿ ಸಲ್ಲಿಸಿದ್ದು ಹೊರಡಿಸಿರುವ ಆದೇಶವನ್ನು ಮುಂದುವರೆಸುವಂತೆ ಕೋರಲಾಗಿದೆ. ಇದಲ್ಲದೆ ಕೇಂದ್ರ ರೇಷ್ಮೆ ಮಂಡಳಿಯ ಸಹಯೋಗದ ಕೆಟಲಿಟಿಕ್ ಅಭಿವೃದ್ಧಿ ಯೋಜನೆಯಡಿ ರೇಷ್ಮೆ ಬೆಳೆಗಾರರಿಗೆ ಹುಳು ಸಾಕಣೆ ಮನೆ ನಿರ್ಮಾಣ, ಹನಿ ನೀರಾವರಿ, ಸೋಂಕು ನಿವಾರಣೆ, ಚಾಕಿ ಸಾಕಾಣಿಕೆ ಕೇಂದ್ರ ಮತ್ತು ಸಲಕರಣೆಗಳಿಗೆ ಪ್ರೋತ್ಸಾಹಧನ ನೀಡುವ ಮೂಲಕ ಇಳುವರಿ / ಉತ್ಪಾದಕತೆ ಹೆಚ್ಚಿಸಿ ಉತ್ಪಾದನಾ ವೆಚ್ಚ ಕಡಿಮೆ ಮಾಡಲು ಪ್ರೋತ್ಸಾಹಿಸಲಾಗುತ್ತಿದೆ. ಹೆಚ್ಚು ಇಳುವರಿ ನೀಡುವ ಹೊಸ ಹಿಪ್ಪುನೇರಳೆ ತಳಿ ಮತ್ತು ಹೊಸ ದ್ವಿತಳಿಗಳ ಸಾಕಣೆಯಿಂದ ಗುಣಮಟ್ಟದ ಸುಧಾರಣೆ ಮತ್ತು ಇಳುವರಿ ಹೆಚ್ಚಿಸಲು ಪ್ರಯತ್ನಿಸಲಾಗುತ್ತಿದೆ.

ಹುಣಸೂರಿಗೆ ಗಿರಿಜನ ಅಭಿವೃದ್ಧಿ ಅಧಿಕಾರಿ ನೇಮಕ

2110 (2625) ಶ್ರೀ ಪಾಪಣ್ಣ ವಿ. (ಹುಣಸೂರು): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಹುಣಸೂರು ತಾಲ್ಲೂಕಿನಲ್ಲಿ ಗಿರಿಜನ ಅಭಿವೃದ್ಧಿಗಾಗಿ ಇಲಾಖೆ ಇರುವುದು ನಿಜವಲ್ಲವೆ;

ಆ) ಈ ಗಿರಿಜನ ಅಭಿವೃದ್ಧಿ ಇಲಾಖೆ ಮುಖ್ಯಸ್ಥರ ಮುಖ್ಯಾಧಿಕಾರಿಯ ಸ್ಥಾನ ರದ್ದು ಪಡಿಸಿರುವುದು ನಿಜವಲ್ಲವೆ;

ಇ) ಹಾಗಿದ್ದಲ್ಲಿ, ಈ ಇಲಾಖೆ ಗಿರಿಜನ ಅಭಿವೃದ್ಧಿ ಕುಂಠಿತವಾಗಿಲ್ಲವೆ;

ಈ) ಈ ಗಿರಿಜನ ಸಂಸ್ಥೆಗೆ ಗಿರಿಜನ ಅಭಿವೃದ್ಧಿ ಅಧಿಕಾರಿ ನೇಮಕ ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು?

ಶ್ರೀ ಎ. ಕೃಷ್ಣಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಹೌದು.

ಆ) ಜೇನುಕುರುಬರ ವಿಶೇಷ ಕರ್ತವ್ಯಾಧಿಕಾರಿ ಹುದ್ದೆಯನ್ನು ರದ್ದುಪಡಿಸಲಾಗಿದೆ.

ಇ) ಈ ಕಛೇರಿಯ ಮೇಲುಸ್ತುವಾರಿಯನ್ನು ಯೋಜನಾ ಸಮನ್ವಯಾಧಿಕಾರಿಗಳು ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ ಮೈಸೂರು ಜಿಲ್ಲೆ ಇವರು ಮಾಡಿ ಗಿರಿಜನ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದಾರೆ. ಆದುದರಿಂದ ವಿಶೇಷ ಕರ್ತವ್ಯಾಧಿಕಾರಿ ಹುದ್ದೆ ರದ್ದುಪಡಿಸಿರುವುದರಿಂದ ಹುಣಸೂರು ತಾಲ್ಲೂಕಿನಲ್ಲಿ ಗಿರಿಜನ ಅಭಿವೃದ್ಧಿ ಯೋಜನೆಗಳ ಅನುಷ್ಠಾನ ಕುಂಠಿತವಾಗಿರುವುದಿಲ್ಲ.

ಈ) 5% ರಷ್ಟು ಹುದ್ದೆಗಳನ್ನು ಕಡಿತಗೊಳಿಸುವ ಸರ್ಕಾರದ ನೀತಿಯನ್ವಯ ಈ ಹುದ್ದೆಯನ್ನು ಕಡಿತಗೊಳಿಸಲಾಗಿದೆ. ಆದುದರಿಂದ ಗಿರಿಜನ ಅಭಿವೃದ್ಧಿ ಅಧಿಕಾರಿಯನ್ನು ನೇಮಕ ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ಹುಣಸೂರು ತಾಲ್ಲೂಕಿನಲ್ಲಿ ಗಣಿಗಾರಿಕೆಗೆ ಪರವಾನಿಗೆ

2111 (2605) ಶ್ರೀ ಪಾಪಣ್ಣ ವಿ. (ಹುಣಸೂರು): ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೈಸೂರು ಜಿಲ್ಲೆ ಹುಣಸೂರು ತಾಲ್ಲೂಕಿನಲ್ಲಿ ಗಣಿಗಾರಿಕೆ ಮಾಡಲು ಪರವಾನಗಿ ಪಡೆದಿರುವವರ ವಿವರ ಹಾಗೂ ಗಣಿಗಾರಿಕೆ ಸ್ಥಳದ ವಿವರ ನೀಡುವುದು;

ಆ) ಹುಣಸೂರು ತಾಲ್ಲೂಕಿನಲ್ಲಿ ಗಣಿಗಾರಿಕೆ ಮಾಡುವವರು ರೈತರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಮೈಸೂರು ಜಿಲ್ಲೆಯ ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳು ಗಣಿಗಾರಿಕೆ ಮಾಡುವವರ ಜೊತೆ ಶಾಮೀಲಾಗಿ ಅನಧಿಕೃತ ಗಣಿಗಾರಿಕೆ ಮಾಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಾದರೆ, ಈ ಅಕ್ರಮ ಗಣಿಗಾರಿಕೆ ಹಾಗೂ ಅಕ್ರಮವಾಗಿ ಕೆಲಸ ಮಾಡುತ್ತಿರುವ ಕಾರ್ಮಿಕರ ಬಗ್ಗೆ ಕೈಗೊಳ್ಳಲಿರುವ ಕ್ರಮ ಏನು?

ಉ) ಸರ್ಕಾರ ತುರ್ತು ಕ್ರಮ ತೆಗೆದುಕೊಳ್ಳಲು ತೊಂದರೆ ಏನು?

ಶ್ರೀ ವಿ. ಮುನಿಯಪ್ಪ (ಗಣಿ ಮತ್ತು ಭೂವಿಜ್ಞಾನ ಸಚಿವರು):

ಅ) ಹುಣಸೂರು ತಾಲ್ಲೂಕಿನಲ್ಲಿ ಗಣಿಗಾರಿಕೆಗಾಗಿ 7 ಕಲ್ಲುಗಣಿ ಗುತ್ತಿಗೆಗಳನ್ನು ಮತ್ತು 3 ಗಣಿ ಗುತ್ತಿಗೆಗಳನ್ನು ನೀಡಿದೆ. ವಿವರಗಳನ್ನು ಅನುಬಂಧ-ಅ ನಲ್ಲಿ ನೀಡಿದೆ.

ಆ) ಬಂದಿದೆ.

ಇ) ಗಣಿ ಮತ್ತು ಭೂವಿಜ್ಞಾನ ಇಲಾಖೆ ಅಧಿಕಾರಿಗಳು ಶಾಮೀಲಾಗಿರುವುದು ಗಮನಕ್ಕೆ ಬಂದಿಲ್ಲ. ಆದರೆ ಅನಧಿಕೃತ ಗಣಿಗಾರಿಕೆ ನಡೆದಿರುವುದನ್ನು ಗಮನಿಸಲಾಗಿದೆ.

ಈ) 18 ಅಕ್ರಮ ಪ್ರಕರಣಗಳನ್ನು ಪತ್ತೆ ಹಚ್ಚಲಾಗಿದೆ. ಈ ಅಕ್ರಮ ಗಣಿಗಾರಿಕೆಯಲ್ಲಿ ತೊಡಗಿದ್ದ ವ್ಯಕ್ತಿಗಳಿಂದ ನಿಯಮಾನುಸಾರ ರೂ. 29,700.00 ದಂಡವನ್ನು ವಸೂಲಿ ಮಾಡಲಾಗಿದೆ. ಮತ್ತು ಗಣಿಗಾರಿಕೆಯನ್ನು ನಿಲ್ಲಿಸಿ, ಸದರಿ ವ್ಯಕ್ತಿಗಳಿಂದ ಗಣಿಗಾರಿಕೆ ಅರ್ಜಿಗಳನ್ನು ಪಡೆದು ಅನಧಿಕೃತ ಗಣಿಗಾರಿಕೆಗಳನ್ನು ಸಕ್ರಮಗೊಳಿಸಲು ಕ್ರಮ ತೆಗೆದುಕೊಳ್ಳಲಾಗಿದೆ. ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು, ಪೋಲೀಸ್ ಅಧಿಕಾರಿಗಳ ಸಹಯೋಗದೊಂದಿಗೆ ಅನಧಿಕೃತ ಗಣಿಗಾರಿಕೆಯನ್ನು ಮುಂದುವರಿಯದಂತೆ ಕ್ರಮ ತೆಗೆದುಕೊಳ್ಳಲಾಗಿದೆ. ಹಾಗೂ ಹುಣಸೂರು ತಾಲ್ಲೂಕಿನ ಬೆಟ್ಟದೂರು ಗ್ರಾಮದ ಸರಹದ್ದಿನಲ್ಲಿ ಗಣಿಗಾರಿಕೆ ನಡೆಸುತ್ತಿದ್ದ ಈ ಪ್ರದೇಶವನ್ನು ನಿಷೇದಿತ ಪ್ರದೇಶ ಎಂದು ಘೋಷಣೆ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಉ) ಮೇಲಿನಂತೆ ತುರ್ತು ಕ್ರಮ ಕೈಗೊಂಡು ಅನಧಿಕೃತ ಗಣಿಗಾರಿಕೆಯನ್ನು ನಿಲ್ಲಿಸಲಾಗಿದೆ.